# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.02 | Issue. 61 | Pages. 2 | Date: 03-02-2026, TUESDAY RNI NO: KARKAN/2024/89601 Kannada Daily

ಸಂಪುಟ : 02 - ಸಂಚಿಕೆ : 61 - ಪುಟಗಳು : 2 03-02-2026 ಮಂಗಳವಾರ Ph: 8762954248 ದರ : ₹1


# ಹಾಸನದಲ್ಲಿ ಆನೆ-ಮಾನವ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಾರ್ಯ ಚುರುಕು

## ಕೇಂದ್ರ ಅರಣ್ಯ ಸಚಿವರನ್ನು ಭೇಟಿ ಮಾಡಿದ ಸಂಸದ ಶ್ರೇಯಸ್ ಪಟೇಲ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನವದೆಹಲಿ: ಹಾಸನ ಜಿಲ್ಲೆಯಲ್ಲಿ ದಶಕಗಳಿಂದ ರೈತರನ್ನು ಕಾಡುತ್ತಿರುವ ಆನೆ-ಮಾನವ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಹಾಸನ ಲೋಕಸಭಾ ಕ್ಷೇತ್ರದ ಸಂಸದ ಶ್ರೇಯಸ್ ಪಟೇಲ್ ಅವರು ಇಂದು ದೆಹಲಿಯಲ್ಲಿ ಕೇಂದ್ರ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದರು.

ಸಭೆಯಲ್ಲಿ ಹಾಸನ ಜಿಲ್ಲೆಯ ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಿರುವ ಗ್ರಾಮಗಳಲ್ಲಿ ಆನೆಗಳ ಅತಿಯಾದ ಸಂಚಾರ, ರೈತರ ಜೀವ-ಜೀವಿಕೆಗೆ ಉಂಟಾಗುತ್ತಿರುವ ಅಪಾಯ ಹಾಗೂ ಬೆಳೆ ನಷ್ಟದ ಬಗ್ಗೆ ಸಂಸದರು ಸಚಿವರ ಗಮನ ಸೆಳೆದರು.

ಶೀಘ್ರದಲ್ಲೇ ಹಾಸನಕ್ಕೆ ಕೇಂದ್ರ ತಂಡ ಭೇಟಿ ಸಚಿವರೊಂದಿಗೆ ನಡೆದ ಚರ್ಚೆಯ ನಂತರ, ಸಂಸದ ಶ್ರೇಯಸ್ ಪಟೇಲ್ ಅವರು ಅರಣ್ಯ ಇಲಾಖೆಯ ಹೆಚ್ಚುವರಿ ಮಹಾ ನಿರ್ದೇಶಕ ರಮೇಶ್ ಕೆ. ಪಾಂಡೇ ಅವರನ್ನು ಭೇಟಿಯಾಗಿ ವಿಚಾರ ವಿನಿಮಯ ಮಾಡಿಕೊಂಡರು. ಸಚಿವರ ನಿರ್ದೇಶನದಂತೆ, ವೈಲ್ಡ್‌ಲೈಫ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ಸಂಸ್ಥೆಯ ತಜ್ಞರ ತಂಡವು ಶೀಘ್ರದಲ್ಲೇ ಹಾಸನ ಜಿಲ್ಲೆಗೆ ಭೇಟಿ ನೀಡಿ ವೈಜ್ಞಾನಿಕ ಅಧ್ಯಯನ ನಡೆಸಲಿದೆ



ಎಂದು ಸಂಸದರು ತಿಳಿಸಿದರು.


ಈ ತಂಡವು ಹಾಸನ ಜಿಲ್ಲೆಯ ಆನೆ ಕಾರಿಡಾರ್‌ಗಳ ಸ್ಥಿತಿ ಆನೆಗಳ ಸಂಚಾರ ಮಾರ್ಗಗಳು ಸಂಘರ್ಷ ತಡೆಗೆ ಕೈಗೊಳ್ಳಬೇಕಾದ ಕ್ರಮಗಳು ಇವುಗಳ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿದೆ. 7 ಗ್ರಾಮಗಳ ರೈತರಿಂದ ಸ್ವಯಂಪ್ರೇರಿತ ಜಮೀನು ಹಸ್ತಾಂತರಕ್ಕೆ ಸಿದ್ಧತೆ ಹಿಂದೆ ನಡೆದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ನಿರ್ಣಯಗಳನ್ನು ಸಚಿವರ ಗಮನಕ್ಕೆ ತಂದ ಸಂಸದರು, ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ ಹಾಗೂ ಆನೆಗಳ ಸಂಚಾರ ಹೆಚ್ಚಿರುವ ಕೆಳಕಂಡ 7 ಗ್ರಾಮಗಳನ್ನು ಯೋಜನೆಯ ವ್ಯಾಪ್ತಿಗೆ ಸೇರಿಸುವಂತೆ ಒತ್ತಾಯಿಸಿದರು:

ಅರಣಿ ಬೋರನಮನೆ ಬಾಳೆಹಳ್ಳ ಬೆಟ್ಟಕುಮರಿ ಮಂಕನಹಳ್ಳಿ ಯತ್ತಹಳ್ಳ ಬಾಜಿ ಮನೆ ಎಸ್ಟೇಟ್ ಈ ಗ್ರಾಮಗಳಲ್ಲಿನ 416 ರೈತರು ತಮ್ಮ ಒಟ್ಟು 2,261.21



ಎಕರೆ ಜಮೀನನ್ನು ಸರ್ಕಾರಕ್ಕೆ ಹಸ್ತಾಂತರಿಸಲು ಸಿದ್ಧರಾಗಿದ್ದಾರೆ ಎಂದು ಸಂಸದರು ತಿಳಿಸಿದರು.

ಪ್ರತಿ ಎಕರೆಗೆ ಕನಿಷ್ಠ 15 ಲಕ್ಷ ರೂ. ಪರಿಹಾರಕ್ಕೆ



SHREYAS M. PATEL
MEMBER OF PARLIAMENT (LOKSABHA)
Hassan - Karnataka

The conventional mitigation measures deployed in this terrain—such as solar-powered fencing and Elephant Proof Trenches (EPTs)—have proved largely ineffective due to the steep, dissected topography, high rainfall and fragmented forest-agriculture mosaic. This has resulted in an unsustainable situation for local farmers who are unable to secure their crops or personal safety despite substantial public expenditure on such barriers.

In Hettur Hobli specifically, district-level surveys and Forest Department records show that:


A large proportion of landowners in eight villages around Bisle have, over the years, expressed their willingness to voluntarily relinquish their private lands for fair and timely compensation, recognising that continued residence in this high-conflict zone is unsafe for their families.

Earlier assessments recorded consent from private landholders for approximately 3,143–3,355 acres of land; more recent reports from Hettur indicate that hundreds of farmers (over 2,200 acres already indicated) are still prepared to part with their lands if adequate rehabilitation and compensation packages are assured.

A district-level committee, as far back as 2012, prepared a comprehensive land acquisition report for these villages, but the project has stalled mainly for want of final approvals and assured funding.

Financially, the State Government had earlier written to the Centre seeking around ₹272 crore under the Compensatory Afforestation Fund Management and Planning Authority (CAMPA) scheme to acquire the necessary private lands and properties for this corridor in Hettur Hobli.

The Deccan Herald and other newspaper reports record a requirement of about ₹252.79 crore for land acquisition (3,355.23 acres of private land) and an additional ₹20 crore for structures and other properties, broadly aligning with the estimate of ₹272.78 crore.



SHREYAS M. PATEL
MEMBER OF PARLIAMENT (LOKSABHA)
Hassan - Karnataka

Pushpagiri and adjoining divisions is formally recognised, monitored and managed as part of a long-term conflict mitigation and conservation strategy.

Supporting this project will provide a humane and durable exit option for hundreds of farming families trapped in a high-conflict landscape while simultaneously securing an irreplaceable ecological corridor for elephants and other wildlife of the Western Ghats.

It will also demonstrate an integrated, science-based and community-supported approach to resolving human-wildlife conflict, consistent with the Ministry's broader vision for sustainable coexistence.

I would be grateful for your kind consideration of this request and suitable direction may kindly be issue to the concerned authorities to fast-track approvals and funding for the Hettur Hobli elephant corridor.

With regards.

Yours sincerely
(Shreyas M Patel)

Shri Bhupender Yadav ji,
Hon'ble Minister of Environment, Forest and Climate Change
Government of India
Indira Paryavaran Bhawan, Jor Bagh
New Delhi-110003

ಆಗ್ರಹ ಆನೆಗಳ ಕಾಟದಿಂದ ಸಂಪೂರ್ಣವಾಗಿ ಬೇಸತ್ತಿರುವ ಈ 7 ಗ್ರಾಮಗಳ ರೈತರು, ಪ್ರತಿ ಎಕರೆಗೆ ಕನಿಷ್ಠ 15 ಲಕ್ಷ ರೂ. ಪರಿಹಾರ ನೀಡಿದಲ್ಲಿ ತಕ್ಷಣವೇ ಜಮೀನು ಬಿಟ್ಟುಕೊಡಲು ಸಿದ್ಧರಾಗಿದ್ದಾರೆ. ಈ ಯೋಜನೆ ಜಾರಿಯಾದಲ್ಲಿ ಆನೆಗಳಿಗೆ ಮುಕ್ತ ಸಂಚಾರಕ್ಕೆ ಅವಕಾಶ ಸಿಗಲಿದ್ದು, ರೈತರ ಜೀವಹಾನಿ ಹಾಗೂ ಆಸ್ತಿ ನಷ್ಟವನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಶ್ರೇಯಸ್ ಪಟೇಲ್ ಹೇಳಿದರು.

ಹಾಸನ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ಈ ಮಹತ್ವದ ಯೋಜನೆಯನ್ನು ಕೇಂದ್ರ ಸರ್ಕಾರ ಆದ್ಯತೆಯ ಮೇಲೆ ಪರಿಗಣಿಸಬೇಕು ಎಂದು ಅವರು ಈ ಸಂದರ್ಭದಲ್ಲಿ ಆಗ್ರಹಿಸಿದರು.

# ನೂತನ ವಾಣಿಜ್ಯ ಸಂಕೀರ್ಣ ಗ್ರಂಥಾಲಯ ಉದ್ಘಾಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರೇಹಳ್ಳಿ: ಮೊಬೈಲ್ ಗೀಳನ್ನು ಬಿಡಿಸಿ ಸಾಮಾಜಿಕ ಜ್ಞಾನವನ್ನು ಹೆಚ್ಚಿಸುವಂತಹ ಶಕ್ತಿ ಇರುವುದು ಪುಸ್ತಕಗಳಿಗೆ ಮಾತ್ರ. ಹಲವಾರು ಪುಸ್ತಕಗಳನ್ನು ಹಾಗೂ ದಿನಪತ್ರಿಕೆಗಳನ್ನು ಸಾಮೂಹಿಕವಾಗಿ ಓದುವಂತಹ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಗ್ರಂಥಾಲಯ ಕಟ್ಟಡ ಉದ್ಘಾಟನೆಯಾಗುತ್ತಿರುವುದು ಖುಷಿಯ ವಿಚಾರ ಎಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ಬೇಲೂರು ತಾಲೂಕು ಅರೇಹಳ್ಳಿ ಗ್ರಾಪಂನ 10 ಲಕ್ಷ ರೂ. ಸಂಪನ್ಮೂಲದಲ್ಲಿ ನಿರ್ಮಾಣ ಮಾಡಲಾದ ಅಟಲ್ ಬಿಹಾರಿ ವಾಜಪೇಯಿ ವಾಣಿಜ್ಯ ಮಳಿಗೆ, 10 ಲಕ್ಷ ರೂ.ಗಳಲ್ಲಿ ನಿರ್ಮಾಣವಾಗುವ ಗ್ರಂಥಾಲಯ ಕಟ್ಟಡ, ಹೆಗ್ಗಡಿಹಳ್ಳಿ ರಸ್ತೆ ಘನ ತ್ಯಾಜ್ಯ ವಿಲೇವಾರಿ ಘಟಕ, ಕೇಶವನಗರದ ಸ್ಮಶಾನದ ಶೆಡ್‌ಗಳ ಉದ್ಘಾಟನೆ ನೆರವೇರಿಸಿದ ಬಳಿಕ ಮಾತನಾಡಿದ ಅವರು, ಗ್ರಾಪಂ ವ್ಯಾಪ್ತಿ ಪ್ರದೇಶಗಳ ಅಭಿವೃದ್ಧಿಗಾಗಿ ಸಂಪನ್ಮೂಲದ ಕ್ರೂಢಿಕರಣವನ್ನು ಮಾಡುವ ಉದ್ದೇಶದಿಂದ ವಾಣಿಜ್ಯ ಮಳಿಗೆ ನಿರ್ಮಾಣವಾಗಿದೆ. ಯಾವುದೇ ಜಾತಿ, ಧರ್ಮದ ಬೇಧವಿಲ್ಲದೇ ಪಂಚಾಯಿತಿಯ 22 ಸದಸ್ಯರ ಸಹಕಾರದಿಂದ ಕಳೆದ ಐದು ವರ್ಷಗಳಲ್ಲಿ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಪಿಡಿಒ ಚಂದ್ರಯ್ಯರವರ ಉಸ್ತುವಾರಿಯಲ್ಲಿ ಪೂರ್ಣಗೊಳಿಸಲಾಗಿದೆ. ಅಭಿವೃದ್ಧಿ ಕಾರ್ಯಗಳಲ್ಲಿ ರಾಜಕಾರಣ ಮಾಡದೆ ಸಮಾಜದ ಉನ್ನತಿಗಾಗಿ ಶ್ರಮಿಸಬೇಕಾಗಿರುವುದು ನಮ್ಮ ಕರ್ತವ್ಯವಾಗಿದೆ ಎಂದರು.

# ವಿಕಸಿತ ಭಾರತ ಸಂಕಲ್ಪಕ್ಕೆ ಕೇಂದ್ರ ಬಜೆಟ್ ಪೂರಕ: ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ವಿಕಸಿತ ಭಾರತ ಪ್ರಧಾನಿ ಮೋದಿ ಕನಸು. 2047ಕ್ಕೆ ವಿಕಸಿತ ಭಾರತ ಆಗಬೇಕು ಎನ್ನುವ ಸಂಕಲ್ಪಕ್ಕೆ ಪೂರಕವಾಗಿ ಕೇಂದ್ರದ ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ಬಜೆಟ್ ಮಂಡಿಸಿದ್ದಾರೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.


ಸೋಮವಾರ ಮಾಧ್ಯಮದ ವರೊಂದಿಗೆ ಮಾತನಾಡಿದ ಅವರು, ಈ ಬಜೆಟ್ ಮೂರು ಪ್ರಮುಖ ಕರ್ತವ್ಯಗಳ ಆಧಾರದ ಮೇಲೆ ಅಭಿವೃದ್ಧಿ ಪೂರಕ ಆಡಳಿತದತ್ತ ಸ್ಪಷ್ಟ ದಿಕ್ಸೂಚಿಯನ್ನು ನೀಡಿದೆ. ಮೊದಲನೆಯದಾಗಿ, ಜಾಗತಿಕ ಆರ್ಥಿಕ ಏರಿಳಿತಗಳ ನಡುವೆಯೂ ಭಾರತದ ಆರ್ಥಿಕ ಪ್ರಗತಿಗೆ ವೇಗ ನೀಡುವುದು ಮತ್ತು ಆರ್ಥಿಕತೆ ಚೇತರಿಸಿಕೊಳ್ಳುವ ಶಕ್ತಿಯನ್ನು ವೃದ್ಧಿಸುವುದು. ಎರಡನೆಯದಾಗಿ ಯುವಜನತೆಯ ಆಕಾಂಕ್ಷೆಗಳನ್ನು ಈಡೇರಿಸುತ್ತಾ ಅವರಲ್ಲಿ ಹೊಸ ಸಾಮರ್ಥ್ಯ ಬೆಳೆಸುವುದು ಹಾಗೂ ಮೂರನೆಯದಾಗಿ ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಮಂತ್ರದೊಂದಿಗೆ ಪ್ರತಿಯೊಂದು ಕುಟುಂಬ,



ಸಮುದಾಯ ಮತ್ತು ಪ್ರದೇಶಗಳಿಗೆ ಅಗತ್ಯ ಸಂಪನ್ಮೂಲ ಹಾಗೂ ಸಮಾನ ಅವಕಾಶಗಳನ್ನು ಒದಗಿಸಿ ಎಲ್ಲರೂ ದೇಶದ ಪ್ರಗತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡುವುದು ಈ ಬಜೆಟ್‌ನ ಆಶಯವಾಗಿದೆ ಎಂದು ಹೇಳಿದರು.

ಈ ಬಜೆಟ್ ಯುವಜನರ ಆಲೋಚನೆಗಳನ್ನು ನೀತಿ ನಿರೂಪಣೆಯಲ್ಲಿ ಅಳವಡಿಸಿಕೊಂಡಿರುವುದು ಶ್ಲಾಘನೀಯ. ಇದು ಯುವಜನರನ್ನು ಕೇವಲ ಫಲಾನುಭವಿಗಳನ್ನಾಗಿ ನೋಡದೆ, ರಾಷ್ಟ್ರದ ನಿರ್ಧಾರಗಳಲ್ಲಿ ಸಕ್ರಿಯ ಪಾಲುದಾರರನ್ನಾಗಿ ಮಾಡಿದೆ. ಆ ಮೂಲಕ ಭಾರತದ ಮುಂದಿನ ಪ್ರಗತಿಯನ್ನು ಯುವಜನರು ಮುನ್ನಡೆಸುತ್ತಾರೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪದೇ ಪದೇ ಒತ್ತಿ ಹೇಳಿದ್ದು, ಅದರತ್ತ ಈ ಬಜೆಟ್ ಕೂಡ ಗಮನಹರಿಸಿರುವುದು ಸಮಯೋಚಿತವೆನಿಸಿದೆ ಎಂದು ಹೇಳಿದರು.ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು 9ನೇ ಬಜೆಟ್ ಮಂಡಿಸಿದ್ದಾರೆ. ಕರ್ತವ್ಯ ಭವನದಲ್ಲಿ ಈ ಬಜೆಟ್ ತಯಾರಾಗಿದೆ. ನಿರ್ಮಲಾ ಸೀತಾರಾಮನ್ ನಮ್ಮವರು. ಕರ್ನಾಟಕದಿಂದಲೇ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ. 9ನೇ ಬಾರಿ ದಾಖಲೆಯ ಬಜೆಟ್ ಮಂಡಿಸಿದ್ದಾರೆ. ಕ್ರೀಡಾ ಕ್ಷೇತ್ರ, ನಾರಿ ಶಕ್ತಿಗೆ ಆದ್ಯತೆ ನೀಡಿದ್ದಾರೆ. ಯಾವುದೇ ಹೊಸ ತೆರಿಗೆಯನ್ನ ಹೇರಿಲ್ಲ. ಸರ್ವಸ್ಪರ್ಷಿ, ಸರ್ವವ್ಯಾಪಿ ಬಜೆಟ್ ಇದು.ದೇಶದ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿದೆ. ಆರ್ಥಿಕ ಸದೃಢತೆ, ವಿಶ್ವಗುರುವಾಗಲು ಪೂರಕ ಬಜೆಟ್ ಮಂಡಿಸಿದ್ದಾರೆ ಎಂದು ತಿಳಿಸಿದರು.

# ತುಳಿತಕ್ಕೊಳಗಾದ ಸಮಾಜಗಳು ಸಂಘಟನೆಯಾಗಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತುಳಿತಕ್ಕೆ ಒಳಗಾದ ಸಮುದಾಯಗಳು ಸಂಘಟನೆಯಾಗಿ ಸರ್ಕಾರದಿಂದ ಸಕಲ ಸೌಲಭ್ಯ ಪಡೆಯಲು ಮುಂದಾಗಬೇಕು ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ಮಿನಿ ವಿಧಾನ ಸೌಧದಲ್ಲಿ ನಡೆದ ಮಡಿವಾಳ ಮಾಚಿದೇವ ಜಯಂತ್ಯೋತ್ಸವ ಉದ್ಘಾಟಿಸಿ ಅವರು ಮಾತನಾಡಿದ ಅವರು, ವೈಯಕ್ತಿಕ ದ್ವೇಷ ಬದಿಗೊತ್ತಿ ಎಲ್ಲಾ ಸಮುದಾಯಗಳು ಸಂಘಟನೆ ಮಾಡಿಕೊಂಡು ಸರ್ಕಾರದಿಂದ ಸವಲತ್ತುಗಳನ್ನು ಪಡೆದು ಆರ್ಥಿಕವಾಗಿ ಸದೃಢರಾಗಬೇಕು. ಪ್ರತಿ ಸಮುದಾಯವು ರಾಜಕೀಯ ಶಕ್ತಿಯಾಗಿ ಹೊರ ಹೊಮ್ಮಬೇಕಾದರೆ ಸಂಘಟನೆ ಅತಿ ಮುಖ್ಯ ಎಂದರು.

ಮಡಿವಾಳ ಸಮಾಜ ಕುಲ ಕಸುಬಿಗೆ ಸೀಮಿತವಾಗದೆ ಶಿಕ್ಷಣದ ಕಡೆ ಗಮನ ಹರಿಸಬೇಕು. ಸಮಾಜ ನಿರ್ಮಾಣ ಮಾಡಿರುವ ಶ್ರೀರಾಮ ಮಂದಿರಕ್ಕೆ ಆರ್ಥಿಕವಾಗಿ ಸಹಕಾರ ನೀಡಲಾಗಿದೆ. ಮಡಿವಾಳ ಸಮಾಜ ಎಲ್ಲಾ ಜನಾಂಗದೊಂದಿಗೆ ಉತ್ತಮ ಬಾಂಧವ್ಯ ಹೊಂದುವ ಮೂಲಕ ಸಮಾಜ ಸೇವೆಯಲ್ಲಿ ತಮನ್ನು ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

12ನೇ ಶತಮಾನದಲ್ಲಿ ಬಸವಣ್ಣ ಜೊತೆ ಸೇರಿ ಮಡಿವಾಳ ಜನರಿಗೆ ಸಮಾನ ಸ್ಥಾನ ನೀಡಲು ಶ್ರಮಿಸಿದವರು, ಅಂದು ಸಮಾಜಕ್ಕೆ ಅಂಟಿದ್ದ ಕೊಳೆ ತೊಳೆಯುವಲ್ಲಿ ಮಾಚಿದೇವರು ಮುಂದಾಗಿದ್ದರು. ಇವರ ತತ್ವ ಹಾಗೂ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕಿದೆ. ಅವರು ನಡೆದ ಹಾದಿಯಲ್ಲಿ ನಾವೆಲ್ಲರೂ ಸಾಗೋಣ ಎಂದು ಕರೆ ನೀಡಿದರು.

ಮಡಿವಾಳ ಸಂಘದ ತಾಲೂಕು ಅಧ್ಯಕ್ಷ ಮಂಜುನಾಥ್ ಮಾತನಾಡಿ, ಯವುದೇ ಸಮುದಾಯ ಸಂಘಟನೆ ಆಗದೆ ಇದ್ದರೆ ರಾಜಕಾರಣಿಗಳು ಗುರುತಿಸುವುದಿಲ್ಲ, ನಾವು ಸಂಘಟಿತರಾದರೆ ರಾಜಕೀಯ ಕ್ಷೇತ್ರದಲ್ಲಿಯೂ ತೊಡಗಿಕೊಳ್ಳಬಹುದಾಗಿದೆ. ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಸಂಘಟನೆಗೆ ಮುಂದಾಗಬೇಕು ಎಂದರು.

ಟಿಎಪಿಸಿಎಂಎಸ್ ಅಧ್ಯಕ್ಷ ವೆಂಕಟೇಶ್, ನಗರ ಯೋಜನಾ ಪ್ರಾಧಿಕಾರ ನಿರ್ದೇಶಕ ವಿಜಯ್‌ಕುಮಾರ್, ಜನಿವಾರ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕ ಪರಮೇಶ್, ಪುನಿತ್ ಉಪಸ್ಥಿತರಿದ್ದರು.

# ಸದೃಢ ಸಮಾಜ ನಿರ್ಮಾಣದಲ್ಲಿ ಮಾಧ್ಯಮದ ಪಾತ್ರ ಅಧಿಕ

## ಪತ್ರಕರ್ತರ ಸಂಘದ ಸಾಂಸ್ಕೃತಿಕ ಸಮಿತಿಯಿಂದ ಸಂವಾದ | ಎಎಸ್ಪಿ ಎಂ.ಕೆ.ತಮ್ಮಯ್ಯ ಉಪನ್ಯಾಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದೇಶಗಳಿಗೆ ಹೋಲಿಸಿದರೆ ಭಾರತದಲ್ಲಿ ಪತ್ರಿಕಾ ಸ್ವಾತಂತ್ರ್ಯ ಹೆಚ್ಚಿದ್ದು ಸದೃಢ ಸಮಾಜ ನಿರ್ಮಾಣಕ್ಕೆ ಪತ್ರಕರ್ತರು ಮುಂದಾಗಬೇಕು. ತನಿಖಾ ಪತ್ರಿಕೋದ್ಯಮ ಹಾಗು ನೈಜ ವರದಿ ಮೂಲಕ ಸಮಾಜದ ಕಣ್ಣು ತೆರೆಸಬೇಕು ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಕೆ. ತಮ್ಮಯ್ಯ ಸಲಹೆ ನೀಡಿದರು.

ಜಿಲ್ಲಾ ಪತ್ರಕರ್ತರ ಸಂಘದ ಸಾಂಸ್ಕೃತಿಕ ಸಮಿತಿ ವತಿಯಿಂದ ಸಂಘದ ಡಿ.ವಿ.ಜಿ. ಸಭಾಂಗಣದಲ್ಲಿ ಸೋಮವಾರ ಸ್ಟಡಿ ವಿಥ್ ಸೊಸೈಟಿ ಹೆಸರಿನಲ್ಲಿ ಹಮ್ಮಿಕೊಂಡಿದ್ದ ಅಪರಾಧ ಸುದ್ದಿ-ಪರಿಣಾಮಗಳು ವಿಷಯ ಕುರಿತು ಸಂವಾದದಲ್ಲಿ ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾಲ್ಕನೇ ಸ್ತಂಭ ಎನಿಸಿರುವ ಮಾಧ್ಯಮ ರಂಗಕ್ಕೆ ಸಂವಿಧಾನದಲ್ಲೇ ರಕ್ಷಣೆ ಇದೆ. ಅಭಿವ್ಯಕ್ತಿ ಸ್ವಾತಂತ್ರ್ಯ ಎಲ್ಲರಿಗೂ ಇದ್ದು ಪತ್ರಿಕೋದ್ಯಮದಲ್ಲಿ ಯಾರು ಬೇಕಾದರೂ ತೊಡಗಿಸಿಕೊಳ್ಳಬಹುದು. ಅಧಿಕಾರದಲ್ಲಿರುವವರನ್ನು ಸದಾ ಎಚ್ಚರಿಸುವುದು,

ಲೋಪ ದೋಷಗಳನ್ನು ಪ್ರಶ್ನೆ ಮಾಡುವುದು ಮಾಧ್ಯಮದ ಜವಾಬ್ದಾರಿ. ನಮ್ಮ ದೇಶದಲ್ಲಿ ಮಾಧ್ಯಮದವರೇ ತನಿಖಾ ವರದಿ ಮಾಡಬಹುದು, ಅದನ್ನು ಪ್ರಕಟ ಮಾಡಿ ಹಂಚಿಕೆ ಮಾಡಲೂಬಹುದು. ಆದರೆ ವಿದೇಶಗಳಲ್ಲಿ ಈ ಸ್ವಾತಂತ್ರ್ಯವಿಲ್ಲ ಎಂದರು.

ಪತ್ರಕರ್ತರಿಗೆ ಭಯ ಇರಬಾರದು, ಭಯ ಇದ್ದರೆ ಏನೂ ಮಾಡಲು ಆಗುವುದಿಲ್ಲ. ಇತ್ತೀಚಿನ ದಿನಗಳಲ್ಲಿ ಮಾಧ್ಯಮಗಳು ಉಳ್ಳವರ ನಿಯಂತ್ರಣದಲ್ಲಿವೆ. ಬಂಡವಾಳಶಾಹಿಗಳು ಮಾಧ್ಯಮಗಳನ್ನು ನಿಯಂತ್ರಿಸುತ್ತಿದ್ದಾರೆ.

ಕೆಲವು ಕಡೆ ರಾಜಕೀಯ ಒತ್ತಡ ಇದೆ. ಪತ್ರಿಕೋದ್ಯಮಿಗಳ ಆರ್ಥಿಕ ಸ್ಥಿತಿಗತಿ ಸದೃಢವಾಗಿಲ್ಲ. ಜೊತೆಗೆ ಭಯದ ವಾತಾವರಣವೂ ಹೆಚ್ಚಾಗುತ್ತಿದೆ. ಹೀಗಾಗಿ ಬಹುತೇಕ ಪತ್ರಿಕೆಗಳು ಬಹುಬೇಗನೆ ಮುಚ್ಚಿ ಹೋಗುತ್ತವೆಂದರು. ಮಾಧ್ಯಮ ಪ್ರತಿನಿಧಿಗಳು ತಮ್ಮ ಜವಾಬ್ದಾರಿ ನಿಬಾಯಿಸುವಾಗ ಎಚ್ಚರ ವಹಿಸಬೇಕು. ಸಂದರ್ಶನ, ತನಿಖಾ ವರದಿಯಲ್ಲಿ ಜಾಗೃತಿ ವಹಿಸಬೇಕು. ಸುದ್ದಿ ಮತ್ತು ವಿಶ್ಲೇಷಣೆಯ ಅರ್ಥವನ್ನು ಅರಿತು ವೃತ್ತಿಯಲ್ಲಿ ಮುಂದುವರಿಯಬೇಕೆಂದರು.

ಸರ್ಕಾರಿ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥೆ ಡಾ. ಭವ್ಯಾ ನವೀನ್ ಅವರು ಮಾತನಾಡಿ, ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಎನಿಸಿರುವ ಪ್ರತಿಕೋದ್ಯಮದ ಮೂಲ ಆಶಯವೇ ಸಮಾಜ ಮತ್ತು ಕಲಿಕೆ ಆಗಿದೆ. ಆದರೆ, ಆರಂಭದ ಪತ್ರಿಕೋದ್ಯಮ, ಹಾಲಿ ಪತ್ರಿಕೋದ್ಯಮ ಮತ್ತು ಕಲಿಸುತ್ತಿರುವ, ಅಸ್ತಿತ್ವದಲ್ಲಿರುವ ಪತ್ರಿಕೋದ್ಯಮ ವ್ಯತಿರಿಕ್ತವಾಗಿದೆ. ನನ್ನ ಪ್ರಕಾರ ಮೂರು ಕಾಲಘಟ್ಟದ ಪತ್ರಿಕೋದ್ಯಮದ ಆಶಯಗಳು ಒಂದೇ ಆದಾಗ ವಿದ್ಯಾರ್ಥಿಗಳು ಸೇರಿ ಎಲ್ಲರಿಗೂ ಅನುಕೂಲ ಆಗಲಿದೆ. ಪತ್ರಿಕೋದ್ಯಮ ಪ್ರಾಯೋಗಿಕ ಕಲಿಕೆಗೆ ಪೂರಕ ಆಗಿರಲಿಯೆಂದು ಆಶಿಸಿದರು. ಹಾಸನದಲ್ಲಿ ಅತ್ಯಧಿಕ ಪತ್ರಿಕೋದ್ಯಮ ಕಾಲೇಜುಗಳಿವೆ. ಹಾಗೆಯೇ ವಿದ್ಯಾರ್ಥಿಗಳೂ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ.

ಹಾಗೆಯೇ ರಾಜ್ಯದಲ್ಲೇ ಗಟ್ಟಿಯಾದ ಸಂಘ ಮತ್ತು ಹಿರಿಯ ಪತ್ರಕರ್ತರಿರುವುದು ಹಾಸನದಲ್ಲೇ. ಈ ಎಲ್ಲರಿಂದ ಭವಿಷ್ಯದಲ್ಲಿ ಜಿಲ್ಲೆಯಿಂದ ಉತ್ತಮ ಪತ್ರಕರ್ತರು ಹೊರ ಬರುವಂತಾಗಲಿ ಎಂದು ಆಶಿಸಿದರು.

ಸಾಂಸ್ಕೃತಿಕ ಸಮಿತಿಯ ಪ್ರಸನ್ನ ಕುಮಾರ್ (ಚಲಂ) ಅವರು, ಸ್ಟಡಿ ವಿಥ್ ಸೊಸೈಟಿಯ ಪರಿಕಲ್ಪನೆ, ಅಪರಾಧ ಸುದ್ದಿಗಳನ್ನು ಮಾಡುವಾಗ ಅನುಸರಿಸಬೇಕಾದ ನಿಯಮ ಹಾಗು ಪತ್ರಿಕಾ ವರದಿಗಳಿಂದ ಅಪರಾಧ ಸುದ್ದಿಗಳ ಮೇಲಾಗುವ ಪರಿಣಾಮಗಳ ಕುರಿತು ವಿವರಿಸಿದರು.

ಸಂಘದ ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ಸಾಂಸ್ಕೃತಿಕ ಸಮಿತಿಯ ಸದಸ್ಯರು ಇದ್ದರು. ಜಿಲ್ಲಾ ಪತ್ರಕರ್ತರ ಸಂಘದ ಕಾರ್ಯದರ್ಶಿ ಕೆ.ಎಂ. ಹರೀಶ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಚೈತ್ರಾ ಮಹಾಲಿಂಗು ನಿರೂಪಿಸಿದರು. ಮಲ್ಲಿಕಾರ್ಜುನ ಕೊಚ್ಚರಗಿ ಸ್ವಾಗತಿಸಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಎಂ.ಕೆ.ತಮ್ಮಯ್ಯ ಅವರನ್ನು ಸನ್ಮಾನಿಸಲಾಯಿತು.




### ವಿದ್ಯಾರ್ಥಿಗಳ ಪ್ರಶ್ನೆಗೆ ಎಎಸ್ಪಿ ಉತ್ತರ

ಅಪರಾಧ ಸುದ್ದಿಗಳಲ್ಲಿ ಮಾಧ್ಯಮ ಹೇಗೆ ಪ್ರಭಾವ ಬೀರುತ್ತದೆ ಎಂಬುದರ ಕುರಿತು ಹೆಚ್ಚುವರಿ ಎಂ.ಕೆ.ತಮ್ಮಯ್ಯ ಅರಿವು ಮೂಡಿಸಿದರು.

ಮಾಧ್ಯಮಗಳಿಗೆ ಎಂತಹ ಶಕ್ತಿ ಇದೆ ಎಂಬುದನ್ನು ಜೆಸಿಕಾ ಲಾಲ್ ಕೊಲೆ ಪ್ರಕರಣದಿಂದ ತಿಳಿಯಬಹುದು. ದೆಹಲಿಯ ನಿರ್ಭಯಾ ಪ್ರಕರಣದಲ್ಲೂ ಮಾಧ್ಯಮಗಳು ಪರಿಣಾಮಕಾರಿ ಕೆಲಸ ಮಾಡಿದವು. ಪೋಕ್ಸೋ ಇತ್ಯಾದಿ ಕಾನೂನಿನಲ್ಲೇ ಹಲವು ರೀತಿಯ ತಿದ್ದುಪಡಿ ಮಾಡಲು ಮಾಧ್ಯಮಗಳೇ ಕಾರಣವೆಂದರು. ಪತ್ರಕರ್ತರು ಹಾಗು ವಿದ್ಯಾರ್ಥಿಗಳ ಪ್ರಶ್ನೆಗೆ ಎಎಸ್ಪಿ ಉತ್ತರಿಸಿದರು. ಇದೇ ವೇಳೆ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ತರಬೇತಿ ಪ್ರಮಾಣ ಪತ್ರ ವಿತರಿಸಲಾಯಿತು.

### ಬಂಡವಾಳ ಶಾಹಿಗಳ ಕಪಿಮುಷ್ಟಿಯಲ್ಲಿ ಪತ್ರಿಕೋದ್ಯಮ

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ ಅವರು ಅಪರಾಧ ಪ್ರಕರಣಗಳ ವರದಿಗಾರಿಕೆ, ಮುನ್ನೆಚ್ಚರಿಕೆ ಬಗ್ಗೆ ಸಾಕಷ್ಟು ಮಾಹಿತಿ ಹಂಚಿಕೊಂಡಿದ್ದಾರೆ. ವಿಶ್ವದಲ್ಲಿ ಭಾರತ ಪತ್ರಿಕೋದ್ಯಮದಲ್ಲಿ 159ನೇ ಸ್ಥಾನದಲ್ಲಿದೆ. ಅದಕ್ಕೆ ಮಾಧ್ಯಮ ಬಂಡವಾಳಶಾಹಿಗಳ ಹಿಡಿತಕ್ಕೆ ಸಿಲುಕಿರುವುದು, ರಾಜಕೀಯ ವ್ಯವಸ್ಥೆ, ಸಂಸ್ಥೆಗಳ ಆರ್ಥಿಕ ಸ್ಥಿತಿಗತಿ ಕಾರಣ ಎಂದರು.

ನಾವು ವೃತ್ತಿ ಬದ್ಧತೆಯಿಂದ ಕೆಲಸ ಮಾಡೋಣ, ಮಕ್ಕಳು ಸಾಕಷ್ಟು ಕನಸು ಹೊತ್ತು ಈ ಕ್ಷೇತ್ರಕ್ಕೆ ಬಂದಿರುತ್ತೀರಿ, ಕ್ರಿಯಾತ್ಮಕವಾಗಿ ಕೆಲಸ ಮಾಡಿ, ಅದಕ್ಕೆ ತಕ್ಕುದಾದ ಸಂಭಾವನೆ, ಗೌರವ ಇದೆ. ಸೈದ್ಧಾಂತಿಕ ನಿಯಮ ಸ್ಪಷ್ಟವಾಗಿರಲಿ ಎಂದರು.

# ಆದಿದ್ರಾವಿಡ ಸಮಾಜದಿಂದ ಫೆ. 5ಕ್ಕೆ ಡಿಸಿ ಕಚೇರಿ ಎದುರು ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪುರದ ಸರ್ವೆ ನಂ. 207/2ಸಿ ಅಡಿಯಲ್ಲಿ ಅಕ್ರಮ ಮಂಜೂರಾತಿ ರದ್ದುಪಡಿಸುವಂತೆ ಮತ್ತು ಸರ್ವೆ ನಂ. 214ರ ಸರ್ಕಾರಿ ಬೀಳು ಪ್ರದೇಶವನ್ನು ತೆರವುಗೊಳಿಸಬೇಕೆಂದು ಆಗ್ರಹಿಸಿ ಫೆ. 5ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಜಿಲ್ಲಾ ಆದಿದ್ರಾವಿಡ ತುಳು




ಸಮಾಜ ಸೇವಾ ಸಂಘದ ಜಿಲ್ಲಾಧ್ಯಕ್ಷ ಬಿ.ಶಂಕರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಸದರಿ ಜಾಗವನ್ನು ವಸತಿ ರಹಿತರ ಮನೆಗಳಿಗೆ ಮತ್ತು ಸರ್ಕಾರದ ಅಭಿವೃದ್ಧಿ ಕಾರ್ಯಗಳಿಗೆ ಬಳಸಬೇಕು. ಈ ಸಂಬಂಧ ಅನೇಕ ಬಾರಿ ಮನವಿ ಸಲ್ಲಿಸಿದರೂ ಯಾರೊಬ್ಬರೂ ಕ್ರಮ ಕೈಗೊಂಡಿಲ್ಲ. ಮುಂಬೈ ವಾಸಿಯಾಗಿರುವ ಇಂದಿರಾ ಬಿ.ಅಮೀನ್ ಎಂಬುವವರಿಗೆ ಅಕ್ರಮವಾಗಿ ಮಂಜೂರು ಮಾಡಲಾಗಿದೆ. ಅದನ್ನು ರದ್ದುಪಡಿಸಿ ವಸತಿ ರಹಿತರಿಗೆ ಇಲ್ಲವೇ ಸರ್ಕಾರದ ಇತರೆ ಅಭಿವೃದ್ಧಿ ಕೆಲಸ ಕಾರ್ಯಗಳಿಗೆ ಬಳಸುವಂತೆ ಸಕಲೇಶಪುರ ಉಪ ವಿಭಾಗಾಧಿಕಾರಿ, ತಹಶೀಲ್ದಾರ್ ಹಾಗೂ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದ್ದೇವೆ. ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರಿಗೂ ಮನವಿ ಮಾಡಿದ್ದೇವೆ. ಆದರೂ ಯಾರೊಬ್ಬರೂ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಪದಾಧಿಕಾರಿಗಳಾದ ಚನ್ನಪ್ಪ, ಸುಬ್ರಹ್ಮಣ್ಯ ಹಾಗೂ ಸೋಮಶೇಖರ್ ಇದ್ದರು.

# ಅಡಿಬೈಲು ರಂಗನಾಥಸ್ವಾಮಿ ಜಾತ್ರಾ ಮಹೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಕೆಂಚಮ್ಮನ ಹೊಸಕೋಟೆ ಮತ್ತು ಕುಂದೂರು ಹೋಬಳಿಗೆ ಸೇರಿದ 48 ಹಳ್ಳಿಗಳಿಗೆ ಸಂಬಂಧಿಸಿದ ಪುರಾಣ ಪ್ರಸಿದ್ಧ ಅಡಿಬೈಲು ಶ್ರೀ ರಂಗನಾಥಸ್ವಾಮಿ ಬಿಂದಿಗಮ್ಮ ದೇವರ ಜಾತ್ರೆ ಅತ್ಯಂತ ವೈಭವದಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ನೆರವೇರಿತು.

ಕಳೆದ ವಾರದ ಹಿಂದೆ ಪ್ರಾರಂಭವಾದ ಮೊದಲ ದಿನ ಶನಿವಾರ ದೊಡ್ಡ ಹರಿ ಸೇವೆ, ಭಾನುವಾರ, ಸೋಮವಾರ ಹಕ್ಕಿನ ಉತ್ಸವ ನಡೆಯಿತು. ಮಂಗಳವಾರ ಬಿಂದಿಗಮ್ಮ ಕಳಸ ಹೊರುವ ಪೂಜಾರಿಯವರಿಗೆ ತಲೆ ಬೋಳಿಸಲಾಯಿತು. ಇವರು ಜಾತ್ರಾ ಮಹೋತ್ಸವ ಮುಗಿಯುವವರೆಗೂ ಹಣ್ಣು-ಹಂಪಲು ಬಿಟ್ಟರೆ ಬೇರೆನನ್ನೂ ಸೇವಿಸದೆ ಪೂಜಾ ಕೈಂಕರ್ಯದಲ್ಲಿ ತೊಡಗಿದರು.

ಬೆಟ್ಟದ ಮೇಲಿರುವ ರಂಗನಾಥಸ್ವಾಮಿ ದೇವಾಲಯದಲ್ಲಿ ಗುರುವಾರ ರಾತ್ರಿ ಬಿಂದಿಗಮ್ಮನವರಿಗೆ ಹಸೆ ಹಾಕಿ ವಿಶೇಷ ಪೂಜೆ ಸಲ್ಲಿಸಲಾಯಿತು. ಶುಕ್ರವಾರ ರಾತ್ರಿ ಗಂಡನ ಕಡೆ ಊರಾದ ಭರತೂರು ಹೊಳೆ ದಡಕ್ಕೆ ಉತ್ಸವ ಮೂರ್ತಿಯೊಂದಿಗೆ ಬಿಂದಿಗಮ್ಮ ಅವರನ್ನು ಕರೆ ತರಲಾಯಿತು.

ಶನಿವಾರ ಹೊಳೆ ದಡದಲ್ಲಿ ನಡೆದ ಜಾತ್ರೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು. ಸಂಜೆ ಬಿಂದಿಗಮ್ಮನವರನ್ನು ಗಂಡನ ಮನೆಯಾದ ರಂಗನಾಥಸ್ವಾಮಿ ದೇವಾಲಯಕ್ಕೆ ಕಳುಹಿಸುವ ಸಂದರ್ಭ ಆಕರ್ಷಣೀಯವಾಗಿತ್ತು. ಕಳಸ ಹೊರಡುವ ಮುನ್ನ ಕುಂದೂರಿನ ಗ್ರಾಮಸ್ಥರನ್ನು ಭರತೂರು ಗ್ರಾಮಸ್ಥರು ಬರಮಾಡಿಕೊಂಡು ವಿಶೇಷ ಆತಿಥ್ಯ ನೀಡಿ ಗೌರವಿಸಿದರು.

ಹೂವು ತುಳಸಿಯಿಂದ ಅಲಂಕೃತವಾದ ಹರಿವಾಣದಲ್ಲಿ ಬಿಂದಿಗಮ್ಮನವರ ಕಳಸವನ್ನು ತಲೆ ಬೋಳಿಸಿದ್ದ ಪೂಜಾರಿ ತಲೆ ಮೇಲೆ ಇಡಲಾಯಿತು. ಸ್ವಲ್ಪ ದೂರ ನಿಧಾನವಾಗಿ ನಡೆದು ಹೋಗುತ್ತಿದ್ದ ಕಳಸ ಹೊತ್ತವರು, ನಂತರದಲ್ಲಿ ತಲೆ ಮೇಲಿರುವ ಕಳಸವನ್ನು ಕೈಯಲ್ಲಿ ಹಿಡಿಯದೆ ಓಡಲು ಪ್ರಾರಂಭ ಮಾಡಿದರು. ಅಲ್ಲಿಂದ ಏಳು ಊರುಬಾಗಿಲನ್ನು ದಾಟಿಕೊಂಡು, ಸುಮಾರು 10 ಕಿ.ಮೀ. ದೂರದ ಗುಡ್ಡದ ಮೇಲಿರುವ ದೇವಸ್ಥಾನಕ್ಕೆ ಕೇವಲ ಒಂದು ಗಂಟೆ ಸಮಯದಲ್ಲಿ ತಲುಪಿತು.

ಪ್ರತಿ ಊರು ಬಾಗಿಲು ಬಳಿ ಅಕ್ಕಿ ಹಸೆ ಬರೆದು ಹಣ ಹಾಕಿದ್ದರು. ಬಾಗಿಲು ದಾಟುವ ಸಂದರ್ಭದಲ್ಲಿ ಕಳಸ ಹೊತ್ತವರು ತನ್ನ ಗದ್ದದಿಂದ ನೆಲದ ಮೇಲಿಟ್ಟ ಹಣವನ್ನು ಮುಟ್ಟಿದರು. ಕಳಸ ಮುಂದೆ ಹೋದ ಕೂಡಲೆ ನೆರೆದಿದ್ದವರು ಹಸೆ ಅಕ್ಕಿಯನ್ನು ಮುಗಿಬಿದ್ದು ತೆಗೆದುಕೊಂಡು ಪುನಿತರಾದರು. ಭಾನುವಾರ ಬೆಟ್ಟದ ಮೇಲೆ ಹಗಲು ಜಾತ್ರೆ ನಡೆಯಿತು. ನೆರೆದಿದ್ದ ಸಾವಿರಾರು ಭಕ್ತರು ದೇವರ ದರ್ಶನ ಮಾಡಿ ಪುನೀತರಾದರು. ಭಕ್ತರಿಗೆ ಅನ್ನದಾನ ನೆರವೇರಿಸಾಯಿತು. ಹೊಲೆ ಬದಿಯಲ್ಲಿ ನಡೆದ ಬಿಂದಿಗಮ್ಮ ಜಾತ್ರೆ ಸಂದರ್ಭದಲ್ಲಿ ಕೆಲವು ಭಕ್ತರು ವಿಶೇಷ ಹರಕೆ ಸಲ್ಲಿಸಿದರು.

ಸೋಮವಾರ ಹೇಮಾವತಿ ನದಿ ನೀರಿನಿಂದ ದೇವರಿಗೆ ಅಭಿಷೇಕ ಮಾಡುವುದರೊಂದಿಗೆ ಜಾತ್ರಾ ಕಾರ್ಯಕ್ರಮಕ್ಕೆ ನಾಂದಿ ಹಾಡಲಾಗುತ್ತದೆ. ನಂತರ ಉಗಾದಿ ಹಬ್ಬದ ಸಂದರ್ಭದಲ್ಲಿ ಭರತೂರು ಕಡೆಗೆ ಸೇರುವ ಸುಮಾರು 10 ಗ್ರಾಮಗಳಲ್ಲಿ ಅಡ್ಡೆ ಉತ್ಸವ ನಡೆಯುತ್ತದೆ. ಜಾತ್ರೆ ಸಂದರ್ಭದಲ್ಲಿ ಕಂದಾಯ, ಪೊಲೀಸ್, ಅರಣ್ಯ ಮತ್ತು ಆರೋಗ್ಯ ಇಲಾಖೆ ಸಿಬ್ಬಂದಿ, ಭಕ್ತರಿಗೆ ತೊಂದರೆಯಾಗದತೆ ವಿಶೇಷ ವ್ಯವಸ್ಥೆ ಕಲ್ಪಿಸಿದ್ದರು.

# ಅಪೂರ್ಣ ಸಮುದಾಯ ಭವನ ಕಾಮಗಾರಿ ಮುಗಿಸಲು ಆದ್ಯತೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನಲ್ಲಿ ಸಮುದಾಯ ಭವನ ನಿರ್ಮಾಣಕ್ಕಿಂತ ಅಪೂರ್ಣಗೊಂಡಿರುವ ಕಾಮಗಾರಿ ಪೂರ್ಣಗೊಳಿಸಲು ಆದ್ಯತೆ ನೀಡಲಾಗುವುದೆಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಬಿರಡಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜನ್ನಾಪುರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಸಮುದಾಯ ಭವನ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿ ಗ್ರಾಮದಲ್ಲಿ ಸಮುದಾಯ ಭವನದ ಅವಶ್ಯಕತೆಯಿದೆ. ಅದರಿಂದ ಬಡವರು ದುಬಾರಿ ಬಾಡಿಗೆ ನೀಡಿ ಖಾಸಗಿ ಕಲ್ಯಾಣ ಮಂಟಪಗಳಲ್ಲಿ ಮದುವೆ ಸೇರಿ ಇತರೆ ಕಾರ್ಯಕ್ರಮ ಮಾಡುವುದು ತಪ್ಪುತ್ತದೆ ಎಂದರು. ಗಂಗಾಮತಸ್ಥ ಸಮುದಾಯವು ಸರ್ಕಾರಿ ಅನುದಾನಗಳ ಜೊತೆಗೆ ಸಾರ್ವಜನಿಕರ ಸಹಕಾರದಿಂದ ಹಣ ಸಂಗ್ರಹಿಸಿ ಸಮುದಾಯ ಭವನ ನಿರ್ಮಿಸಿರುವುದು ಗಮನಾರ್ಹ. ಜನ್ನಾಪುರ ಗ್ರಾಮಕ್ಕೆ ಹಂತ ಹಂತವಾಗಿ ಮೂಲ ಸೌಕರ್ಯ ಒದಗಿಸುವ ಪ್ರಯತ್ನ ಮಾಡಲಾಗುವುದೆಂದರು.

ಬಿರಡಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸೋಮಶೇಖರ್ ಮಾತನಾಡಿ, ಈ ಹಿಂದಿನ ಶಾಸಕರು, ಹಾಲಿ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸೇರಿ ಹಲವರು ಸಮುದಾಯ ಭವನ ನಿರ್ಮಾಣಕ್ಕೆ ಅನುದಾನ ನೀಡಿದ್ದಾರೆ. ಸಮುದಾಯ ಭವನದ ಪಕ್ಕದಲ್ಲಿ ದೇವಸ್ಥಾನ ನಿರ್ಮಾಣ ಮಾಡುವ ಯೋಜನೆಯಿದ್ದು, ಇದಕ್ಕೂ ನೆರವು ನೀಡುವಂತೆ ಮನವಿ ಮಾಡಿದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಶೃತಿ, ಮಾಜಿ ಅಧ್ಯಕ್ಷ ಸತೀಶ್, ಶಾರದಾ, ಮಧುಮಣಿ, ವನಜಾಕ್ಷಿ, ಬೈಕೆರೆ ದೇವರಾಜ್, ಗಂಗಾಮತಸ್ಥ ಸಮಾಜದ ಗೋಪಾಲ್, ಧರ್ಮಪ್ಪ, ಮಂಜುನಾಥ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪಲ್ಲವಿ ಇತರರಿದ್ದರು.

# ಮತದಾನ ಪ್ರಜಾಪ್ರಭುತ್ವದ ಆಧಾರ ಸ್ತಂಭ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಮತದಾನವು ಪ್ರಜಾಪ್ರಭುತ್ವದ ಆಧಾರ ಸ್ತಂಭವಾಗಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕನು ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಉಪನ್ಯಾಸಕ ಬಿ.ಪಿ.ಬಸವರಾಜು ತಿಳಿಸಿದರು.

ಪಟ್ಟಣದ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ, ಮತದಾನದ ಇತಿಹಾಸ ಹಾಗೂ ಮತದಾರರ ಹಕ್ಕು ಮತ್ತು ಕರ್ತವ್ಯಗಳನ್ನು ಅರಿತು ಕಡ್ಡಾಯವಾಗಿ ಮತದಾನದಲ್ಲಿ ಪಾಲ್ಗೊಂಡಾಗ ಮಾತ್ರ ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು ಮತ್ತು ಪ್ರಜಾಪ್ರಭುತ್ವವನ್ನು ಜೀವಂತವಾಗಿಡುವ ಪ್ರಮುಖ ಕರ್ತವ್ಯವೂ ಆಗಿರುತ್ತದೆ ಎಂದರು.

18 ವರ್ಷ ತುಂಬಿದ ಪ್ರತಿಯೊಬ್ಬ ಭಾರತೀಯ ನಾಗರಿಕನು ತನ್ನ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬೇಕು ಹಾಗೂ ಯಾವುದೇ ಭಯ, ಲಾಲಸೆ ಅಥವಾ ಒತ್ತಡವಿಲ್ಲದೆ ಸ್ವತಂತ್ರವಾಗಿ ಮತ ಚಲಾಯಿಸಬೇಕಿದೆ.ಮತದಾನ ಪ್ರಕ್ರಿಯೆಯಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಯುವಶಕ್ತಿಯ ಜಾಗೃತಿಯಿಂದಲೇ ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ಹೇಳಿದರು. ಮತದಾನದಲ್ಲಿ ಭಾಗವಹಿಸುವುದರಿಂದ ಜನಸಾಮಾನ್ಯರು ತಮ್ಮ ಧ್ವನಿಯನ್ನು ಆಡಳಿತ ವ್ಯವಸ್ಥೆಗೆ ತಲುಪಿಸಬಹುದು ಎಂದು ಅವರು ಸ್ಪಷ್ಟಪಡಿಸಿದರು. ಉಪನ್ಯಾಸದ ಅಂತ್ಯದಲ್ಲಿ ಅವರು ಎಲ್ಲರನ್ನೂ ನಿಯಮಿತವಾಗಿ ಮತದಾನದಲ್ಲಿ ಭಾಗವಹಿಸುವ ಪ್ರತಿಜ್ಞೆ ತೆಗೆದುಕೊಳ್ಳುವಂತೆ ಪ್ರೇರೇಪಿಸಿದರು.

ಕಾರ್ಯಕ್ರಮದ ಭಾಗವಾಗಿ ಮತದಾನ ಜಾಗೃತಿ ಕಾರ್ಯಕ್ರಮ, ಪಾದಯಾತ್ರೆ ಹಾಗೂ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಈ ಮೂಲಕ ಮತದಾನದ ಕುರಿತು ಸಮಾಜದಲ್ಲಿ ಜಾಗೃತಿ ಮೂಡಿಸುವ ಪ್ರಯತ್ನ ಮಾಡಲಾಯಿತು.

ಐಟಿಐ ಕಾಲೇಜಿನ ಯೋಗನಾಥ್, ವಸಂತ್ ಪುನೀತಾ, ಸ್ಮಿತಾ, ಸುನಿಲ್, ದೇವರಾಜ್, ಚಂದ್ರಿಕಾ, ಪ್ರದೀಪ್, ಹರೀಶ್ ಮತ್ತು ಆನಂದ್ ಅವರು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕಾರ ನೀಡಿದರು.

# ನಿವೇಶನ ವಿವಾದ: ಯಥಾಸ್ಥಿತಿ ಕಾಪಾಡಲು ಪೊಲೀಸರ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚಲನಚಿತ್ರ ನಟ ಯಶ್ ತಾಯಿ ಪುಷ್ಪಾ ಅವರ ಮನೆ ಸಮೀಪದ ನಿವೇಶನದ ಮಾಲೀಕತ್ವ ವಿಚಾರವಾಗಿ ವಾಗ್ವಾದ ಮುಂದುವರಿದಿದ್ದು, ಜಿಪಿಎ ಹೋಲ್ಡರ್ ದೇವರಾಜು ಜೊತೆ ತೀವ್ರವಾಗ್ವಾದ ನಡೆಸಿದರು.

ಶನಿವಾರವಷ್ಟೇ ಸ್ಥಳಕ್ಕೆ ಭೇಟಿ ನೀಡಿದ್ದ ಪುಷ್ಪಾ ಅವರು ತಮ್ಮದೆಂದು ಹೇಳಿಕೊಳ್ಳುತ್ತಿರುವ ನಿವೇಶನ ಸುತ್ತ ಕಾಂಪೌಂಡ್ ಕಟ್ಟಿಸುತ್ತೇನೆಂದು ಶಪಥ ಮಾಡಿದ್ದರು. ಅದರಂತೆ ಭಾನುವಾರ ತಮ್ಮ ಸಂಬಂಧಿಕರು ಹಾಗೂ ಕಾರ್ಮಿಕರೊಂದಿಗೆ ಕಟ್ಟಡ ಕಾಮಗಾರಿ ಪ್ರಾರಂಭಿಸಿದ್ದರು. ಅದೇ ವೇಳೆ ಸ್ಥಳಕ್ಕಾಗಮಿಸಿದ ಜಿಪಿಎ ಹೋಲ್ಡರ್ ದೇವರಾಜು ಮತ್ತಿತರರು ಪ್ರತಿರೋಧ ಒಡ್ಡಿದರು. ನಿವೇಶನದ ಮಾಲೀಕತ್ವ ವಿವಾದದಲ್ಲಿರುವುದರಿಂದ ಕಾಮಗಾರಿ ತಕ್ಷಣ ಸ್ಥಗಿತಗೊಳಿಸುವಂತೆ ಒತ್ತಾಯಿಸಿದರು. ಅದರಿಂದ ಪುಷ್ಪಾ ಹಾಗು ದೇವರಾಜು ನಡುವೆ ವಾಗ್ವಾದ ನಡೆಯಿತು.

ನಾನು ಕೆಲಸ ಮಾಡಿಯೇ ತೀರುತ್ತೇನೆಂದು ಪಟ್ಟು ಹಿಡಿದ ಪುಷ್ಪಾ, ಸ್ಥಳದಲ್ಲೇ ನಿಂತು ಕಾಮಗಾರಿಯನ್ನು ಮುಂದುವರಿಸಿದರು. ಈ ಸಂದರ್ಭ ವಾಗ್ವಾದ ತೀವ್ರಗೊಂಡು ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿತು. ಪರಿಸ್ಥಿತಿ ನಿಯಂತ್ರಣಕ್ಕೆ ಬಾರದ ಹಿನ್ನಲೆ ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು.




ಘಟನೆಯ ಮಾಹಿತಿ ಪಡೆದ ಬಡಾವಣೆ ಪೊಲೀಸರು ದೌಡಾಯಿಸಿ ಎರಡೂ ಕಡೆಯವರನ್ನು ಸಮಾಧಾನಪಡಿಸಿದರು. ಈ ವೇಳೆ ಪುಷ್ಪಾ ಅವರು ಪೊಲೀಸರನ್ನು ಪ್ರಶ್ನಿಸಿ, ದೇವರಾಜು ಅವರನ್ನು ಏಕೆ ಬಂಧಿಸಿಲ್ಲ ಮತ್ತು ಕಾಮಗಾರಿಗೆ ಬಳಸಲಾಗುತ್ತಿದ್ದ ಜೆಸಿಬಿಯನ್ನು ಏಕೆ ಸೀಜ್ ಮಾಡಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಅಲ್ಲದೇ ಮಾಧ್ಯಮದವರು ವಿಡಿಯೋ ಚಿತ್ರೀಕರಣ ಮಾಡದಂತೆ ಅವರು ತಾಕೀತು ಮಾಡಿದರು.

ಪೊಲೀಸರ ಮಧ್ಯಸ್ಥಿಕೆಯಿಂದ ಕಾಂಪೌಂಡ್ ನಿರ್ಮಾಣ ಕಾಮಗಾರಿ ಸ್ಥಗಿತಗೊಳಿಸಲಾಯಿತು. ಕಾಮಗಾರಿಗೆ ಬಳಸುತ್ತಿದ್ದ ಸಾಮಾಗ್ರಿಗಳನ್ನು ಸ್ಥಳಾಂತರಿಸಲಾಯಿತು.

ನಿವೇಶನ ಸುತ್ತ ಕಾಂಪೌಂಡ್ ನಿರ್ಮಾಣಕ್ಕೆ ಪೊಲೀಸರು ತಡೆಯೊಡ್ಡುತ್ತಿದ್ದಂತೆ ತನ್ನ ಬೆಂಬಲಿಗರೊಂದಿಗೆ ಪುಷ್ಪಾ ಅವರು ವಕೀಲರೊಂದಿಗೆ ಬಡಾವಣೆ ಠಾಣೆಗೆ ತೆರಳಿದರು. ಅವರ ಹಿಂದೆಯೇ ದೇವರಾಜು ಸಹ ಪ್ರತ್ಯೇಕ ಕಾರಿನಲ್ಲಿ ಠಾಣೆಗೆ ಬಂದರು. ಪೊಲೀಸ್ ಇನ್ಸ್‌ಪೆಕ್ಟರ್ ರಾಘವೇಂದ್ರ ಪ್ರಸಾದ್ ಅವರನ್ನು ಭೇಟಿಯಾದ ಪುಷ್ಪಾ, ಎಫ್‌ಐಆರ್ ದಾಖಲಾಗಿದ್ದರೂ ದೇವರಾಜು ಅವರನ್ನು ಬಂಧಿಸಿಲ್ಲ. ಕಳೆದ ತಿಂಗಳು ಕಾಂಪೌಂಡ್ ನೆಲಸಮಗೊಳಿಸಿದ ಜೆಸಿಬಿಯನ್ನು ಏಕೆ ಸೀಜ್ ಮಾಡಿಲ್ಲವೆಂದು ಪ್ರಶ್ನಿಸಿದರು.

ಪುಷ್ಪಾ ಅವರ ವಾಗ್ವಾದ ಮುಂದುವರಿಯುತ್ತಿದ್ದಂತೆ ಇನ್ಸ್‌ಪೆಕ್ಟರ್ ಊಟಕ್ಕೆ ಹೋಗಿ ಬರುವುದಾಗಿ ತೆರಳಿದರು. ಸಂಜೆ 5.30ರ ವರೆಗೆ ಇನ್ಸ್‌ಪೆಕ್ಟರ್ ವಾಪಾಸ್ ಬರಲಿಲ್ಲ. ಆದರೂ ಪುಷ್ಪಾ ಹಾಗು ದೇವರಾಜು ಠಾಣೆಯಲ್ಲೇ ಕುಳಿತರು. ಮಧ್ಯಾಹ್ನದ ಊಟಕ್ಕೂ ಸಹ ಅವರು ಅಲ್ಲಿಂದ ಹೋಗಲಿಲ್ಲ. ಸಂಜೆ ಇನ್ಸ್‌ಪೆಕ್ಟರ್ ಆಗಮಿಸಿ, ಇದು ಸಿವಿಲ್ ಪ್ರಕರಣವಾಗಿರುವುದಿಂದ ನಾವು ಅಂತಿಮ ತೀರ್ಮಾನ ಕೈಗೊಳ್ಳಲು ಸಾಧ್ಯವಿಲ್ಲ. ನ್ಯಾಯಾಲಯ ಆದೇಶದ ವರೆಗೆ ಯಥಾಸ್ಥಿತಿ ಕಾಪಾಡಬೇಕು. ಸದ್ಯಕ್ಕೆ ಕಾಂಪೌಂಡ್ ನಿರ್ಮಾಣ ಮಾಡಬಾರದೆಂದು ಸೂಚಿಸಿದರು. ಬಳಿಕ ಪುಷ್ಪಾ ಹಾಗು ದೇವರಾಜು ಠಾಣೆಯಿಂದ ನಿರ್ಗಮಿಸಿದರು.

## ಡಾ. ಬಿ.ಆರ್.ಅಂಬೇಡ್ಕರ್ ನುಡಿ ಮುತ್ತು

**ಜಾತಿ ವ್ಯವಸ್ಥೆ ಸಮಾಜವನ್ನು ವಿಭಜಿಸುತ್ತದೆ;ಶಿಕ್ಷಣ ಮಾತ್ರ ಅದನ್ನು ಏಕಮಾಡುತ್ತದೆ.**

ವಿವರಣೆ: ಡಾ.ಬಿ.ಆರ್.ಅಂಬೇಡ್ಕರ್ ಅವರ ಈ ಚಿಂತನೆ ಭಾರತೀಯ ಸಮಾಜದ ಆಳವಾದ ಸಮಸ್ಯೆಯಾದ ಜಾತಿ ವ್ಯವಸ್ಥೆಯ ವಿರುದ್ಧದ ಶಕ್ತಿಶಾಲಿ ಸಂದೇಶವಾಗಿದೆ. ಜಾತಿ ವ್ಯವಸ್ಥೆ ಮಾನವರನ್ನು ವಿಭಜಿಸಿ ಅಸಮಾನತೆ ಮತ್ತು ಅನ್ಯಾಯವನ್ನು ಬೇರೂರಿಸುತ್ತದೆ. ಇದರ ವಿರುದ್ಧವಾಗಿ, ಶಿಕ್ಷಣವು ವ್ಯಕ್ತಿಗೆ ವಿವೇಕ, ಆತ್ಮಗೌರವ ಮತ್ತು ಪ್ರಶ್ನಿಸುವ ಶಕ್ತಿಯನ್ನು ನೀಡುತ್ತದೆ. ಶಿಕ್ಷಣದಿಂದ ಮಾನವೀಯ ಮೌಲ್ಯಗಳು ಬೆಳೆದು ಸಮಾನತೆ, ಸಹೋದರತ್ವ ಮತ್ತು ಸಾಮಾಜಿಕ ಏಕತೆ ಸಾಧ್ಯವಾಗುತ್ತದೆ. ಅಂಬೇಡ್ಕರ್ ಅವರು ಶಿಕ್ಷಣವನ್ನೇ ಸಮಾಜ ಪರಿವರ್ತನೆಯ ಪ್ರಧಾನ ಸಾಧನವೆಂದು ಪ್ರತಿಪಾದಿಸಿದ್ದಾರೆ.

**– ಅಂತೋಣಿ ಮುತ್ತು ವಿ, ಶಿಕ್ಷಕರು** 7259675543

# ಡಿವೈಡರ್‌ಗೆ ಡಿಕ್ಕಿಯಾಗಿ ಕಾರು ಚಾಲಕ ಸಾವು

ಅರಸೀಕೆರೆ: ನಿಯಂತ್ರಣ ತಪ್ಪಿ ಕಾರು ಡಿವೈಡರ್‌ಗೆ ಡಿಕ್ಕಿಯಾಗಿ ಚಾಲಕ ಮೃತಪಟ್ಟಿರುವ ಘಟನೆ ತಾಲೂಕಿನ ಚಿಕ್ಕಬಾಣಾವರ ಗೇಟ್ ಸಮೀಪ ನಡೆದಿದೆ.

ಹಾರನಹಳ್ಳಿ ಗ್ರಾಮದ ಮಂಜುನಾಥ್ ಮೃತರು. ಸಂಬಂಧಿಕರಾದ ಪವನ್ ಹಾಗೂ ನವೀನ್ ಅವರೊಂದಿಗೆ ಅರಸೀಕೆರೆಯಿಂದ ಎಲೆಕ್ಟ್ರಿಕ್ ಸಾಮಗ್ರಿ ಖರೀದಿಸಿ ಊರಿಗೆ ವಾಪಸ್ಸಾಗುತ್ತಿದ್ದಾಗ ಚಿಕ್ಕಬಾಣಾವರ ಗೇಟ್ ಹತ್ತಿರ ಅತೀವೇಗ ಮತ್ತು ಅಜಾಗರೂಕ ಚಾಲನೆಯಿಂದ ಕಾರು ಡಿವೈಡರ್‌ಗೆ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಮೂವರು ಗಂಭೀರ ಗಾಯಗೊಂಡಿದ್ದರು.


ಸಾರ್ವಜನಿಕರು ಮೂವರನ್ನು ಕಾರಿನಿಂದ ಕೆಳಗಿಳಿಸುತ್ತಿದ್ದಂತೆ ಬೆಂಕಿ ಹೊತ್ತಿಕೊಂಡಿದೆ. ಆ್ಯಂಬುಲೆನ್ಸ್ ಮೂಲಕ ಎಲ್ಲರನ್ನೂ ಅರಸೀಕೆರೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಯಿತು. ಗಂಭೀರ ಗಾಯಗೊಂಡಿದ್ದ ಮಂಜುನಾಥ್ ಮೃತಪಟ್ಟಿದ್ದಾರೆ.

# ಮೂಢ ನಂಬಿಕೆಯಿಂದ ಪ್ರಗತಿಗೆ ಅಡ್ಡಗಾಲು: ಬಿ.ಆರ್.ಜಾನಕಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮೂಢ ನಂಬಿಕೆಗಳು ಮಾನವನ ವೈಯಕ್ತಿಕ ಮತ್ತು ಸಾಮಾಜಿಕ ಪ್ರಗತಿಗೆ ಅಡ್ಡಿಯಾಗುತ್ತಿವೆ. ಅದರಿಂದ ಮನುಷ್ಯ ಮೋಸ ಹೋಗುತ್ತಿದ್ದು, ಅಮೂಲ್ಯ ಸಮಯ, ಹಣ ಹಾಗೂ ಚಿಂತನಾ ಶಕ್ತಿ ಕಳೆದುಕೊಳ್ಳುತ್ತಿದ್ದಾನೆಂದು ಬಿಜಿವಿಎಸ್ ಜಿಲ್ಲಾ ಕಾರ್ಯದರ್ಶಿ ಬಿ.ಆರ್.ಜಾನಕಿ ಹೇಳಿದರು.

ಇಲ್ಲಿನ ಕುವೆಂಪು ನಗರದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಭಾರತ ಜ್ಞಾನ ವಿಜ್ಞಾನ ಸಮಿತಿಯಿಂದ ಹಮ್ಮಿಕೊಂಡಿದ್ದ ವೈಜ್ಞಾನಿಕ ಮನೋವೃತ್ತಿ ಮತ್ತು ಮೂಢನಂಬಿಕೆಗಳು ವಿಷಯ ಕುರಿತ ಸಂವಾದದಲ್ಲಿ ಮಾತನಾಡಿ, ಮೂಢ ನಂಬಿಕೆಗಳಿಗೆ ದೇವರು ಅಥವಾ ಧರ್ಮದೊಂದಿಗೆ ಯಾವುದೇ ನೇರ ಸಂಬಂಧವಿಲ್ಲ. ವಿಶ್ವದ ಭೌತಿಕ ನಿಯಮಗಳ ಆಧಾರದಲ್ಲಿ ಮೂಢ ನಂಬಿಕೆಗಳಿಗೆ ಕಾರಣ ನೀಡಲು ಸಾಧ್ಯವಿಲ್ಲ ಎಂದರು.




ವಿದ್ಯಾರ್ಥಿಗಳು ಪ್ರಶ್ನೋತ್ತರಗಳ ಮೂಲಕ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ವೈಜ್ಞಾನಿಕ ಮನೋವೃತ್ತಿಯ ಅಗತ್ಯತೆಯ ಕುರಿತು ಬಿಜಿವಿಎಸ್ ತಾಲ್ಲೂಕು ಕಾರ್ಯದರ್ಶಿ ಬಿ.ಕೆ.ಲೋಲಾಕ್ಷಿ ಮಾರ್ಗದರ್ಶನ ನೀಡಿದರು.

ಮುಖ್ಯ ಶಿಕ್ಷಕಿ ಎನ್.ಎಸ್.ರಾಧಾ, ಶಿಕ್ಷಕರಾದ ಎಸ್.ಆರ್.ಮೀನಾ, ಆರ್.ಮೀನಾಕ್ಷಿ, ಎಂ.ಆರ್.ರಶ್ಮಿ, ಜಿ.ಜಿ.ರವೀಂದ್ರ ಮತ್ತಿತರರಿದ್ದರು.

# ಕೇಂದ್ರ ಬಜೆಟ್‌ನಲ್ಲಿ ಜಿಲ್ಲೆಗೆ ಶೂನ್ಯ ಕೊಡುಗೆ: ಸಂಸದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ ಬಜೆಟ್ ಉಪ್ಪು-ಖಾರ ಇಲ್ಲದ ಊಟದಂತಾಗಿದ್ದು ಜಿಲ್ಲೆಗೆ ಘೋರ ಅನ್ಯಾಯ ಮಾಡಲಾಗಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಆಕ್ರೋಶ ವ್ಯಕ್ತಪಡಿಸಿದರು.

ದೆಹಲಿಯಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯ ಹಾಗೂ ಜಿಲ್ಲೆಯನ್ನು ಸಂಪೂರ್ಣ ಕಡೆಗಣಿಸಿದೆ. ವಿರೋಧ ಪಕ್ಷದವರು ಸಂಸದರಾಗಿರುವುದೇ ತಪ್ಪು ಎಂಬಂತಾಗಿದೆ. ಜಿಲ್ಲೆಗೆ ಒಳಿತು ಮಾಡಬೇಕೆಂದು ಹತ್ತು-ಹಲವು ಕನಸುಗಳೊಂದಿಗೆ ಮೊದಲ ಬಾರಿ ಸಂಸದನಾಗಿದ್ದೇನೆ. ಈ ರೀತಿ ನಿರ್ಲಕ್ಷ್ಯ ಮಾಡಿದರೆ ಕ್ಷೇತ್ರ ಅಭಿವೃದ್ಧಿ ಹೇಗೆ



ಎಂದು ಅವರು ಪ್ರಶ್ನಿಸಿದ್ದಾರೆ.

ಹಾಸನದಲ್ಲಿ ಜ. 24 ರಂದು ಸಮಾವೇಶ ಮಾಡಿದ ಜೆಡಿಎಸ್ ನಾಯಕರು ಈ ಬಜೆಟ್ ಬಗ್ಗೆ ಏನು ಹೇಳುತ್ತಾರೆ ಕಾದು ನೋಡಬೇಕಿದೆ. ಎನ್‌ಡಿಎ ಮೈತ್ರಿಯಲ್ಲಿರುವುದರಿಂದ ಬಜೆಟ್‌ನಲ್ಲಿ ಜಿಲ್ಲೆಗೆ ವಿಶೇಷ ಯೋಜನೆಗಳು ಘೋಷಣೆಯಾಗುತ್ತವೆಂಬ ನಿರೀಕ್ಷೆಯಿತ್ತು. ಆದರೆ, ಕೇಂದ್ರದಿಂದ ಮಲತಾಯಿ ಧೋರಣೆ ಈ ವರ್ಷವೂ ಮುಂದುವರಿದಿದೆ. ಉಪ್ಪು-ಖಾರ ಇಲ್ಲದ ಸಪ್ಪೆ ಬಜೆಟ್ ಇದಾಗಿದೆ. ಜಿಲ್ಲೆಯ ಜ್ವಲಂತ ಸಮಸ್ಯೆಗಳನ್ನು ಪರಿಗಣಿಸಿಲ್ಲ. ಜಿಲ್ಲೆಗೆ ಐಐಟಿ ನೀಡುವಂತೆ ಮೂರು ಬಾರಿ ಮನವಿ ಮಾಡಿದ್ದೆ. ಕಾಡಾನೆ-ಮಾನವ ಸಂಘರ್ಷ ತಡೆಗೆ ಆನೆ ಕಾರಿಡಾರ್ ನಿರ್ಮಾಣಕ್ಕೆ ಹಲವು ಬಾರಿ ಪ್ರಸ್ತಾವನೆ ಸಲ್ಲಿಸಿದ್ದೆ. ಆದರೆ, ಸರ್ಕಾರ ನಮ್ಮ ಬೇಡಿಕೆಗಳಿಗೆ ಸ್ಪಂದಿಸಿಲ್ಲ. ಆಶಾ ಹಾಗು ಅಂಗನವಾಡಿ ಕಾರ್ಯಕರ್ತರ ಗೌರವಧನ ಹೆಚ್ಚಿಸಲು ನೌಕರರು ಅಂಗಲಾಚಿದರೂ ಕಡೆಗಣಿಸಿದೆ.

ವಿಧವಾ ವೇತನ ಹೆಚ್ಚಳಕ್ಕೆ ಆಗ್ರಹಿಸಲಾಗಿತ್ತಾದರೂ ಪರಿಗಣಿಸಿಲ್ಲ ಎಂದು ಕಿಡಿಕಾರಿದರು.

ಜಿಲ್ಲೆಯ ವಿಶ್ವಪ್ರಸಿದ್ಧ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಅನುದಾನ ಘೋಷಿಸಿಲ್ಲ. ತೆಂಗು ಬೆಳೆಗಾರರನ್ನು ಸಂಪೂರ್ಣ ನಿರ್ಲಕ್ಷಿಸಲಾಗಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನ ಬಿಡುಗಡೆ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಧಾನ ಮಂತ್ರಿ ಆವಾಸ್ ಯೋಜನೆಗೆ ನೀಡುವ ಪ್ರೋತ್ಸಾಹ ಧನ ಹೆಚ್ಚಿಸಿಲ್ಲ. ರಾಜ್ಯ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವಂತೆ ಎಷ್ಟೇ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ಬಡವರು, ದೀನ ದಲಿತರ ಬಗ್ಗೆ ಕರುಣೆ ತೋರದ ಅಮಾನವೀಯ ಬಜೆಟ್ ಇದಾಗಿದೆ. ರಾಜ್ಯದಿಂದ ಆಯ್ಕೆಯಾಗಿರುವ ಆಡಳಿತ ಪಕ್ಷದ ಸಂಸದರು ಇನ್ನಾದರೂ ರಾಜ್ಯದ ಪರವಾಗಿ ಮಾತನಾಡಲಿ ಎಂದು ಆಗ್ರಹಿಸಿದರು.

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-03

**1913:** ಅಮೆರಿಕದ ಮಹಿಳಾ ಮತದಾನ ಹಕ್ಕು ಚಳವಳಿಗೆ ಮಹತ್ವದ ತಿರುವು ನೀಡಿದ ಮೊದಲ ಮಹಿಳಾ ಮೆರವಣಿಗೆ ವಾಷಿಂಗ್ಟನ್ ಡಿ.ಸಿ.ಯಲ್ಲಿ ನಡೆಯಿತು.

**1928:** ಭಾರತದ ಕ್ರಾಂತಿಕಾರಿ ಹೋರಾಟಗಾರ ಸರೋಜಿನಿ ನಾಯ್ಡು ಅವರನ್ನು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಅಧ್ಯಕ್ಷರಾಗಿ ಆಯ್ಕೆ ಮಾಡಲಾಯಿತು.

**1969:** ಪಾಕಿಸ್ತಾನದ ಅಧ್ಯಕ್ಷ ಅಯೂಬ್ ಖಾನ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು.

**1984:** ಅಮೆರಿಕದ ಬಾಹ್ಯಾಕಾಶ ನೌಕೆ ಸ್ಪೇಸ್ ಶಟಲ್ ಚಾಲೆಂಜರ್ ತನ್ನ ಹತ್ತನೇ ಹಾರಾಟವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿತು.


**ಜನನ**

**1809:** ಫೆಲಿಕ್ಸ್ ಮೆಂಡೆಲ್ಸೋನ್, ಜರ್ಮನ್ ಸಂಗೀತಕಾರ

**ನಿಧನ**

**1924** ವುಡ್ರೋ ವಿಲ್ಸನ್, ಅಮೆರಿಕದ ಮಾಜಿ ಅಧ್ಯಕ್ಷ

# ವಿವಿಧ ಕಾಮಗಾರಿಗೆ ಶಾಸಕ ಸ್ವರೂಪ್ ಭೂಮಿಪೂಜೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ವಿವಿಧೆಡೆ ಭಾನುವಾರ 50 ಲಕ್ಷ ರೂ. ವೆಚ್ಚದ ವಿವಿಧ ಕಾಮಗಾರಿಗೆ ಶಾಸಕ ಹೆಚ್.ಪಿ.ಸ್ವರೂಪ್ ಭಾನುವಾರ ಭೂಮಿಪೂಜೆ ನೆರವೇರಿಸಿದರು.

ದೊಡ್ಡಮಂಡಿಗನಹಳ್ಳಿ ಬಳಿ 25 ಲಕ್ಷ ರೂ. ವೆಚ್ಚದಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಲಾಯಿತು. ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಸ್ಥಳೀಯರು ಹಾಗೂ ಪಕ್ಷದ ಮುಖಂಡರು ಪಟಾಕಿ ಸಿಡಿಸಿ ಶಾಸಕ ಸ್ವರೂಪ್ ಅವರನ್ನು ಸ್ವಾಗತಿಸಲಾಯಿತು. ಬಳಿಕ ವಿಜಯನಗರದಲ್ಲಿ ಸಮುದಾಯ ಭವನ ನಿರ್ಮಾಣ, 15 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಕಾರಾಳಮ್ಮ ದೇವಸ್ಥಾನ ಕಟ್ಟಡ ಕಾಮಗಾರಿ, ದೊಡ್ಡಮಂಡಿಗನಹಳ್ಳಿ ಮತ್ತು ವಿಜಯನಗರ ಬಡಾವಣೆಗೆ ಕುಡಿಯುವ ನೀರಿನ ಸಮಸ್ಯೆ ನೀಗಿಸಲು 50 ಲಕ್ಷ ರೂ. ವೆಚ್ಚದ ಒಂದು ಲಕ್ಷ ಲೀಟರ್ ಸಾಮರ್ಥ್ಯದ ನೀರಿನ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

# ಗ್ರಾ.ಪಂ. ಅಭಿವೃದ್ಧಿಗೆ ಹೆಚ್ಚುವರಿ ಅನುದಾನಕ್ಕೆ ಆಗ್ರಹ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಗ್ರಾಮ ಪಂಚಾಯಿತಿಗಳು ತಮ್ಮ ವ್ಯಾಪ್ತಿಯಲ್ಲಿ ಮೂಲಸೌಕರ್ಯ ಕಲ್ಪಿಸಿಕೊಳ್ಳಲು ಸರ್ಕಾರ ಹೆಚ್ಚಿನ ಅನುದಾನ ನೀಡಬೇಕು ಹಾಗೂ ಸ್ಥಳೀಯವಾಗಿ ಸಂಪನ್ಮೂಲ ಕ್ರೂಢೀಕರಣಕ್ಕೆ ಆದ್ಯತೆ ನೀಡಬೇಕೆಂದು ಶಾಸಕ ಸಿಮೆಂಟ್ ಮಂಜು ಸಲಹೆ ನೀಡಿದರು.

ತಾಲ್ಲೂಕಿನ ಬೈರಾಪುರ ಗ್ರಾಮ ಪಂಚಾಯಿತಿ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದಲ್ಲಿ ರೈತರು, ಕಾರ್ಮಿಕರು, ಬಡವರು, ದೀನದಲಿತರು ತಮ್ಮ ಕೆಲಸ ಕಾರ್ಯಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಗ್ರಾಮ ಪಂಚಾಯಿತಿಗಳನ್ನು ಅವಲಂಬಿಸಿರುತ್ತಾರೆ. ಜನಪ್ರತಿನಿಧಿಗಳು ಜನರ ಋಣ ತೀರಿಸಲು ಶ್ರಮಿಸಬೇಕು. ಅದನ್ನೇ ಆದ್ಯತೆಯಾಗಿಸಿಕೊಂಡರೆ ಮತದಾರರಿಗೆ ಕೃತಜ್ಞತೆ ಸಲ್ಲಿಸಿದಂತಾಗುತ್ತದೆ ಎಂದರು.

ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಕೆ.ಎಸ್.ಮಂಜೇಗೌಡ ಮಾತನಾಡಿ, ಬೈರಾಪುರ ಗ್ರಾಮ ಪಂಚಾಯಿತಿಯು ಈ ಹಿಂದಿನಿಂದಲೂ ರಾಜಕೀಯವಾಗಿ ಸುದ್ದಿಯಲ್ಲಿರುತ್ತದೆ. ಆದರೂ ಕೂಡ ಅಧ್ಯಕ್ಷರು-ಉಪಾಧ್ಯಕ್ಷರು ಹಾಗು ಎಲ್ಲಾ ಸದಸ್ಯರು ಸಹಕಾರದಿಂದ ಒಳ್ಳೆಯ ಕೆಲಸ ಮಾಡುತ್ತಿದ್ದಾರೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹೇಮಾ ಮಂಜೇಗೌಡ, ಉಪಾಧ್ಯಕ್ಷೆ ಸವಿತಾ ರಂಗಸ್ವಾಮಿ ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248